ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 699
2. ಸದಸ್ಯರ ಹೆಸರು : ಶ್ರೀ ಕೆ.ಟಿ.ಶ್ರೀಕಂಠೇಗೌಡ
3. ಉತ್ತರಿಸಬೇಕಾದ ದಿನಾಂಕ : 12-03-2020
4. ಉತ್ತರಿಸುವ ಸಚಿವರು : ಮಾನ್ಯ ಜಲಸಂಪನ್ಮೂಲ ಸಚಿವರು

ಕ್ರ ಸಂ	ಪ್ರಶ್ನೆಗಳು	ಉತ್ತರಗಳು
ಅ	ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕು, ಕೊಪ್ಪ ಗ್ರಾಮದ ಕೆರೆಯ ಒಟ್ಟು ವಿಸ್ತೀರ್ಣ ಎಷ್ಟು;	ಕೊಪ್ಪ ಕೆರೆಯು 527 ಎಕರೆ ವಿಸ್ತೀರ್ಣವನ್ನು ಹೊಂದಿರುತ್ತದೆ.
ಆ	ಸದರಿ ಕೆರೆಯು ಎಷ್ಟು ಒತ್ತುವರಿಯಾಗಿದೆ; (ವಿವರ ನೀಡುವುದು)	ಕೆರೆಯ ಒತ್ತುವರಿ ವಿಸ್ತೀರ್ಣವನ್ನು ಅಂದಾಜಿಸಲು ಸರ್ವೆ ಕಾರ್ಯವನ್ನು ಕೈಗೊಳ್ಳಲು ಕ್ರಮ ವಹಿಸಲಾಗುತ್ತಿದ್ದು, ಸರ್ವೆ ಕಾರ್ಯ ಮುಗಿದ ನಂತರ ಒತ್ತುವರಿಯನ್ನು ತೆರವುಗೊಳಿಸಲು ಸೂಕ್ತ ಕ್ರಮ ಜರುಗಿಸಲಾಗುವುದು.
ಇ	ಈ ಕೆರೆಯ ಒತ್ತುವರಿ ತೆರವುಗೊಳಿಸಿ ಹೂಳು ತೆಗೆಯಲು ಸರ್ಕಾರಕೈಗೊಂಡಿರುವ ಕ್ರಮಗಳೇನು;	2018-19 ನೇ ಸಾಲಿನಲ್ಲಿ ಕೆರೆಯಲ್ಲಿನ ಭಾಗಶಃ ಹೂಳನ್ನು ಅಂದರೆ ಸುಮಾರು 93261.66 ಕ್ಯೂಬಿಕ್ ಮೀಟರ್‌ನಷ್ಟು ತೆಗೆಯಲಾಗಿರುತ್ತದೆ.
ಈ	ಒಟ್ಟಾರೆ ರಾಜ್ಯದಲ್ಲಿನ ಕೆರೆಗಳ ಒತ್ತುವರಿ ತೆರವಿಗೆ ಸರ್ಕಾರ ಕೈಗೊಂಡ ಕ್ರಮಗಳೇನು?	ರಾಜ್ಯದಲ್ಲಿನ ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಯಲ್ಲಿ 1627 ಕೆರೆಗಳಿದ್ದು, ಅವುಗಳ ಪೈಕಿ 91 ಕೆರೆಗಳ ಸುಮಾರು 747 ಎಕರೆ ಒತ್ತುವರಿಯಾಗಿದ್ದು, 603 ಎಕರೆ ಒತ್ತುವರಿ ಪ್ರದೇಶವನ್ನು ತೆರವು ಮಾಡಲಾಗಿದೆ ಹಾಗೂ ಉಳಿದ ಒತ್ತುವರಿಯನ್ನು ತೆರವುಗೊಳಿಸಲು ಸೂಕ್ತ ಕ್ರಮ ಜರುಗಿಸಲಾಗುವುದು.

ಸಂಖ್ಯೆ:ಜಸಂಇ 44 ಎನ್‌ಎಲ್‌ಎ 2020

(ರಮೇಶ್ ಲ. ಜಾರಕಿಹೊಳಿ)
ಜಲಸಂಪನ್ಮೂಲ ಸಚಿವರು